# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸಕಾಅ/ವಾ.ಸಂ.15/ಪಿಆರ್/293 /2020-21

ಸಹಾಯಕ ಕಾರ್ಯಪಾಲಕ ಅಭಿಯಂತರವರಕಛೇರಿ
ಟಿ.ದಾಸರಹಳ್ಳಿ ಉಪವಿಭಾಗ, ದಾಸರಹಳ್ಳಿ ವಲಯ
ಬೆಂಗಳೂರು, **ದಿನಾಂಕ** :17-10-2020

## ವಾರ್ಡ್-15ರ ವಾರ್ಡ್ ಸಭೆಯ ನಡವಳಿ

ದಿನಾಂಕ:-17-10-2020 ರಂದು ಟಿ.ದಾಸರಹಳ್ಳಿ ಉಪ ವಿಭಾಗದ ವಾರ್ಡ್ ನಂ.15ರ ವಾರ್ಡ್ ಕಛೇರಿಯಲ್ಲಿ ಶ್ರೀ.ಅಶೋಕ್ ಹಿಂಡ, ಕಾರ್ಯಪಾಲಕ ಅಭಿಯಂತರರು, ಹೆಬ್ಬಾಳ ವಾರ್ಡ್-15ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

1. ಶ್ರೀ ಅಶೋಕ್ ಹಿಂಡ, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು.
2. ಶ್ರೀಮತಿ.ಅರ್ಚನಾ , ಸಹಾಯಕ ಅಭಿಯಂತರರು ಮತ್ತು ಸದಸ್ಯ ಕಾರ್ಯದರ್ಶಿ
3. ಶ್ರೀ.ನಾರಾಯಣಸ್ವಾಮಿ, ಸಹಾಯಕ ಕಂದಾಯ ಅಧಿಕಾರಿ, ದಾಸರಹಳ್ಳಿ ಉಪ-ವಿಭಾಗ
4. ಶ್ರಿ..ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
5. ಶ್ರೀಮತಿ.ಚೈತ್ರ, ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
6. ಶ್ರೀ.ವೆಂಕಟರಮಣಪ್ಪ, ಜಲಪರಿವೀಕ್ಷಕರು, BWSSB
7. ಶ್ರೀ.ಡಿ.ಶ್ರೀನಿವಾಸ್, ಕರವಸೂಲಿಗಾರರು, ದಾಸರಹಳ್ಳಿ ವಾರ್ಡ್ ನಂ.15
8. ಶ್ರೀ.ರಂಗಸ್ವಾಮಿ, ಮೌಲ್ಯಮಾಪಕರು, ದಾಸರಹಳ್ಳಿ ವಾರ್ಡ್ ನಂ.15
9. ಶ್ರೀ.ಮುನಿರಾಜು, ದಲಿತ ಸಂಘರ್ಷ ಸಮಿತಿ ಸದಸ್ಯರು, ದಾಸರಹಳ್ಳಿ ವಾರ್ಡ್ ನಂ.15
10. ಶ್ರೀ.ರಾಜು, ಸಾಮಾಜಿಕ ಕಾರ್ಯಕರ್ತರು, ದಾಸರಹಳ್ಳಿ ವಾರ್ಡ್ ನಂ.15

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು/ಹಾಜರಿದ್ದ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1)**ಕೋವಿಡ್-19 ಸಾಂಕ್ರಮಿಕ ರೋಗದ ಬಗ್ಗೆ** :- ವಾರ್ಡಿನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ರ ಬಗ್ಗೆ ಚರ್ಚಿಸಿ ಒಟ್ಟು +Ve ಕೇಸ್ 642 ಒಟ್ಟು ಬಿಡುಗಡೆ -413 ಒಟ್ಟು ಆಕ್ಟಿವ್ ಕೇಸ್-112 ಇದರಲ್ಲಿ ಸಾವಿನ ಸಂಖ್ಯೆ 05 ಹಾಗೂ ಗೃಹ ಬಂಧನ 91, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರು 21 ಇರುತ್ತದೆ ಎಂದು ಸಭೆಗೆ ತಿಳಿಸಿದರು.

- ನೋಡಲ್ ಅಧಿಕಾರಿಗಳು ಮಾತನಾಡಿ ತಾತ್ಕಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಸ್ಥಳಗಳಲ್ಲಿ ಕ್ಯಾಂಪ್‌ಗಳನ್ನು ಹಮ್ಮಿಕೊಂಡು ಹೆಚ್ಚಿನ ಪರೀಕ್ಷೆ ನಡೆಸುವಂತೆ ಸೂಚಿಸಿದರು.
- ಕಡ್ಡಾಯವಾಗಿ ಮಾಸ್ಕ್ ಧರಿಸುವಂತೆ ಜನಜಾಗೃತಿ ಮೂಡಿಸಲು ಧ್ವನಿವರ್ಧಕವಿರುವ ಆಟೋಗಳಲ್ಲಿ ಸಾಯಂಕಾಲ 5 ರಿಂದ 7 ಗಂಟೆಯವರೆಗೆ ಜನನಿಬಿಡ ಪ್ರದೇಶಗಳಲ್ಲಿ ಪ್ರಚಾರ ಮಾಡಲು ವ್ಯವಸ್ಥೆ ಮಾಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಘನತ್ಯಾಜ್ಯದ ಗುತ್ತಿಗೆದಾರರಿಗೆ ಸೂಚಿಸಿದರು. ಜೊತೆಗೆ ಬೀದಿ ಬದಿಗಳಲ್ಲಿ ತಳ್ಳುವಗಾಡಿ & ಇತರೆ ವಾಣಿಜ್ಯ ಚಟುವಟಿಕೆದಾರರಿಗೆ ತ್ಯಾಜ್ಯವನ್ನು ಸೂಕ್ತವಾಗಿ ವಿಲೇವಾರಿ ಮಾಡುವಂತೆ ಜಾಗೃತಿ ಮೂಡಿಸಲು ಸೂಚಿಸಿದರು.
- ಮಾಸ್ಕ್ ಧರಿಸದೆ ಸಾರ್ವಜನಿಕವಾಗಿ ಓಡಾಡುವರಿಗೆ ಕಡ್ಡಾಯಾಗಿ ನಿಯಮಾವಳಿಗಳನ್ವಯ ದಂಡ ವಿಧಿಸುವುದು ಮತ್ತು ಮಾಸ್ಕ್ ಧರಿಸುವಂತೆ ಹಾಗೂ ಸಾಮಾಜಿಕ ಅಂತರ ಕಾಪಾಡಿಕೊಳ್ಳುವಂತೆ ಮನವೊಲಿಸುವ ಕೆಲಸವನ್ನು ನಿರ್ವಹಿಸುವಂತೆ ಸೂಚಿಸಿದರು.

2) **ಸ್ವಚ್ಛತೆ ಮತ್ತು ಘನತ್ಯಾಜ್ಯ ವಿಲೇವಾರಿ ಬಗ್ಗೆ** :-

ವಾರ್ಡ್ ಸಂಖ್ಯೆ 15 ರಲ್ಲಿ 21 ಆಟೋಗಳಿದ್ದು, 02 ಕ್ಯಾಂಪ್ಯಾಕ್ಟರ್ ಗಳಿರುತ್ತವೆ ಎಲ್ಲಾ ಆಟೋಗಳಿಗೆ ಜಿ.ಪಿ.ಎಸ್ ಮತ್ತು ಆರ್‌ಎಫ್.ಐ.ಡಿ ಹಾಗೂ ಧ್ವನಿವರ್ಧಕ ಅಳವಡಿಸಲಾಗಿರುತ್ತದೆ. ಕಸ ವಿಂಗಡಣೆಯ ಬಗ್ಗೆ ಹೆಚ್ಚಿನ ಆಸಕ್ತಿ ವಹಿಸಲಾಗಿರುತ್ತದೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಆರ್.ಡಬ್ಲ್ಯೂ.ಎ ಗಳನ್ನು ಮತ್ತು ಸ್ವಯಂಸೇವಕಗುಗಳನ್ನು ಸಂಪರ್ಕಿಸಿ ಕಸ ವಿಂಗಡಣೆ ಮಹತ್ವ ಮತ್ತು ಅವಶ್ಯಕತೆ ಬಗ್ಗೆ ತಿಳುವಳಿಕೆ ಮೂಡಿಸಲಾಗುತ್ತಿದೆ. ವಾರ್ಡಿನಲ್ಲಿ ಎಲ್ಲಾ ಬ್ಲಾಕ್ ಸ್ಪಾಟ್‌ಗಳನ್ನು ಪರಿಶೀಲಿಸಿ ಕಸ ವಿಂಗಡಣೆ ಮಾಡಲು ಸಂಬಂಧಪಟ್ಟ ಆರೋಗ್ಯಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮು.ತಿ.ನೋ

5) **ಕಾಮಗಾರಿ ಇಲಾಖೆ** :- ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳಿದ್ದು ಇವುಗಳನ್ನು ವೆಟ್ ಮಿಕ್ಸ್‌ನಿಂದ ಮುಚ್ಚುವುದಾಗಿದ್ದು ಮಳೆ ನಿಂತ ಕೂಡಲೇ ಡಾಂಬರು ಮಿಕ್ಸ್‌ನಿಂದ ಮುಚ್ಚುವುದಾಗಿ ಹಾಗೂ ಸಹಾಯ 2.0 ಆ್ಯಪ್‌ನಲ್ಲಿನ ಎಲ್ಲಾ ದೂರುಗಳನ್ನು ಪರಿಹರಿಸಲಾಗಿದೆ ಎಂದು ಸಹಾಯಕ ಅಭಿಯಂತರು ರವರು ಸಭೆಗೆ ತಿಳಿಸಿದರು.

- ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ವ್ಯಾಪಿಯಲ್ಲಿ ಸಾರ್ವಜನಿಕರ ಸಮಸ್ಯೆ/ ದೂರುಗಳನ್ನು ದಾಖಲಿಸಲು ವಾರ್ಡ್‌ನಲ್ಲಿ ದೂರು ದಾಖಲಿಸುವ ಪುಸ್ತಕ ತೆರದು ದಾಖಲಾಗುವ ದೂರುಗಳನ್ನು ಆದ್ಯತೆಯ ಮೇಲೆ ಕ್ರಮ ವಹಿಸುವಂತೆ ಸೂಚಿಸಿದರು.
- ಸದರಿ ವಾರ್ಡಿನ ಮುಖ್ಯರಸ್ತೆಗಳನ್ನು ತುರ್ತಾಗಿ ಸಾರ್ವಜನಿಕರು ಸುಗಮವಾಗಿ ಸಂಚಾರಿಸುವಂತೆ ಕ್ರಮ ವಹಿಸಲು ವಾರ್ಡ್‌ನ ಎಲ್ಲಾ ಅನುದಾನಗಳನ್ನು ಉಪಯೋಗಿಸಿಕೊಂಡು ಕ್ರಮ ಕೈಗೊಳ್ಳಲು ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

6) **ಉದ್ಯಾನವನ ನಿರ್ವಹಣೆ** :- ನೋಡಲ್ ಅಧಿಕಾರಿಗಳು ವಾರ್ಡ್ ವ್ಯಾಪ್ತಿಯಲ್ಲಿನ ಉದ್ಯಾನವನಗಳಲ್ಲಿ ಗಿಡದ ಕತ್ತರಿಸಿದ ಭಾಗಗಳನ್ನು ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ವಹಿಸುವಂತೆ ಸೂಚಿಸಿದರು.

7) **ವಾರ್ಡ್ ಸಮಿತಿಯನ್ನು ರಚಿಸುವ ಬಗ್ಗೆ** :- ನೋಡಲ್ ಅಧಿಕಾರಿಗಳು ಮಾತನಾಡಿ ವಾರ್ಡ್ ಸಮಿತಿಯನ್ನು ರಚಿಸಿ ಸದಸ್ಯರುಗಳನ್ನು ಆಯ್ಕೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು.

8) ಶ್ರೀ.ಮುನಿರಾಜು, ದಲಿತ ಸಂಘರ್ಷ ಸಮಿತಿ ಸದಸ್ಯರು ಹಾಗೂ ಶ್ರೀ.ರಾಜು, ಸಾಮಾಜಿಕ ಕಾರ್ಯಕರ್ತರು ದಾಸರಹಳ್ಳಿ ರವರು ಸಭೆಯಲ್ಲಿ ಮಾತನಾಡಿ 2019-20ನೇ ಸಾಲಿನ ಅನುದಾನದಲ್ಲಿ ಮಂಜೂರಾಗಿರುವ ಆರ್.ಓ ಪ್ಲಾಂಟ್ ನಿರ್ಮಾಣ ಮಾಡಲು ಸೂಕ್ತ ಸ್ಥಳವನ್ನು ಗುರುತಿಸಿ, ದಾಸರಹಳ್ಳಿ ವಾರ್ಡ್‌ನ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ಅನುಕೂಲವಾಗುವಂತೆ ಕ್ರಮವಹಿಸಲು ಸೂಚಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗು ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ. 15, ದಾಸರಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ಕಾರ್ಯಪಾಲಕ ಅಭಿಯಂತರರು, ಹೆಬ್ಬಾಳ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

<u>ಅಧಿಕಾರಿಗಳ ಮಾಹಿತಿಗಾಗಿ</u>

1) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
2) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
3) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
6) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
7) ಕಛೇರಿ ಪ್ರತಿ.